156 (159)

ಶ್ರೀ ಚೌಡರೆಡ್ಡಿ (ಚಿಂತಾಮಣಿ): ಸನ್ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು, ಶಾಸಕರು ತಮ್ಮ ಕಾರ್ಯವನ್ನು ನಿರ್ವಹಿಸಲು ನೆರವಾಗುವ ಬಗ್ಗೆ ಸರ್ಕಾರ ಯಾವುದಾದರೂ ಆದೇಶ ಸುತ್ತೋಲೆಗಳನ್ನು ಹೊರಡಿಸಿದೆಯೇ?

ಆ) ವಿಧಾನಪರಿಷತ್ತಿನ ಸದಸ್ಯರು ಹಾಗೂ ವಿಧಾನಸಭಾ ಸದಸ್ಯರು ಬರೆದಂತಹ ಪತ್ರಗಳಿಗೆ ಹಾಗೂ ಮೌಖಿಕ ಕೋರಿಕೆಗಳಿಗೆ ಸರ್ಕಾರಿ ನೌಕರರು: ಅಧಿಕಾರಿಗಳು ಸ್ಪಂದಿಸುತ್ತಿಲ್ಲವೆಂಬ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಕೋಲಾರ ಜಿಲ್ಲೆಯ ಸರ್ಕಾರಿ ನೌಕರರು: ಅಧಿಕಾರಿಗಳು ಮತ್ತು ರಾಜ್ಯ ಮಟ್ಟದ ಅಧಿಕಾರಿಗಳು ಪತ್ರಗಳಿಗೆ ಉತ್ತರಿಸದೇ ಇರಲು ಕಾರಣ ಏನು?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):

ಅ) ರಾಜ್ಯ ವಿಧಾನಮಂಡಲದ ಸದಸ್ಯರಿಂದ ಬಂದ ಪತ್ರಗಳಿಗೆ ಕೂಡಲೇ ಉತ್ತರ ನೀಡುವ ಬಗ್ಗೆ ಸರ್ಕಾರವು ಸಾಕಷ್ಟು ಸೂಚನೆಗಳನ್ನು ನೀಡಿದೆ.

ಆ) ಇಲ್ಲ.

ಇ) ನಿರ್ದಿಷ್ಟ ಪ್ರಕರಣವನ್ನು ಸರ್ಕಾರದ ಗಮನಕ್ಕೆ ತಂದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದ ಸಮಸ್ಯೆಗಳ ಕುರಿತು.

157 (20)

ಶ್ರೀ ಎ.ಎಸ್.ಗುರುಸ್ವಾಮಿ (ಚಾಮುಂಡೇಶ್ವರಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರದೊಡನೆ ಸಮನ್ವಯ ನಡೆಸಲು ನವದೆಹಲಿಯಲ್ಲಿ ಕ್ಯಾಬಿನೆಟ್ ದರ್ಜೆ ಸಚಿವರನ್ನು ರಾಜ್ಯ ಪ್ರತಿನಿಧಿಯಾಗಿ ಇಡುವ

ಅವಶ್ಯಕತೆಯನ್ನು ಸರ್ಕಾರವು ಪರಿಗಣಿಸಿದೆಯೇ?

ಆ) ಹಾಗಿದ್ದಲ್ಲಿ, ಈವರೆವಿಗೂ ಪ್ರತಿನಿಧಿಯನ್ನು ನೇಮಕಾತಿ ಮಾಡದೆ ಇರಲು ಕಾರಣಗಳೇನು?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):

ಅ) ಈ ಆಲೋಚನೆ ಸಧ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ದೆಹಲಿಯಲ್ಲಿರುವ ಕರ್ನಾಟಕ ಭವನ ಕುರಿತು

159 (22)

ಶ್ರೀ ಗುರುಸ್ವಾಮಿ ಎ.ಎಸ್ (ಚಾಮುಂಡೇಶ್ವರಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯವಲ್ಲದೇ ನವದೆಹಲಿಯಲ್ಲಿರುವ ಕರ್ನಾಟಕ ಭವನದಲ್ಲೂ ಸಹ ಅತಿಥಿಗಳ ಆಗಮನ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿರುವ ಬಗ್ಗೆ ಸರ್ಕಾರಕ್ಕೆ ತಿಳಿದಿದೆಯೆ?

ಆ) ಹಾಗಿದ್ದ ಪಕ್ಷದಲ್ಲಿ ಸರ್ಕಾರವು ಅತಿಥಿಗಳಿಗೆ ಸೂಕ್ತ ಸೌಲಭ್ಯವನ್ನು ನೀಡುವಲ್ಲಿ ತೆಗೆದುಕೊಂಡಿರುವ ಕ್ರಮಗಳೇನು?

ಇ) ಮುಂಬರುವ ದಿನಗಳಲ್ಲಿ ಹೊಸದಾಗಿ ಬೆಂಗಳೂರು ಹಾಗೂ ನವದೆಹಲಿಯಲ್ಲಿ ಅತಿಥಿ ಗೃಹಗಳನ್ನು ಕಟ್ಟಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯ ಮಂತ್ರಿಗಳು):

ಅ) ತಿಳಿದಿದೆ.

ಆ) 1963ರಲ್ಲಿ ಕಟ್ಟಿಸಿದ ಕರ್ನಾಟಕ ಭವನ-1ರ ಜೊತೆಗೆ ಅತಿಥಿಗಳ ಹೆಚ್ಚಿನ ಆಗಮನವನ್ನು ಗಮನದಲ್ಲಿ ಇಟ್ಟುಕೊಂಡು 1988ರಲ್ಲಿ 34 ಕೊಠಡಿಗಳ ಕರ್ನಾಟಕ ಭವನ-2 (ಶರಾವತಿ) ವಸತಿ ಗೃಹವನ್ನು ಹಾಗೂ 1998ರಲ್ಲಿ ಪುನಃ 34 ಕೊಠಡಿಗಳ ಕರ್ನಾಟಕ ಭವನ-3 (ಭೀಮಾ) ವಸತಿ ಗೃಹವನ್ನು ತೆರೆಯಲಾಗಿದೆ.